ಕರ್ನಾಟಕ ಸರ್ಕಾರ

**ನಿರ್ದೇಶಕರ ಕಛೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು**

ಸಂಖ್ಯೆ: ಪಪೂಶಿಇ/ಶೈಶಾ/ದಾ.ವೇ.ಶೈ.ಚ/2019-20 ದಿನಾಂಕ:12-08-2020

# ಸುತ್ತೋಲೆ

ವಿಷಯ: ದ್ವಿತೀಯ ಪಿಯುಸಿ ಪೂರಕ ಪರೀಕ್ಷೆ-2020ರ ಹಿನ್ನೆಲೆಯಲ್ಲಿ ಪದವಿ ಪೂರ್ವ ಕಾಲೇಜುಗಳಲ್ಲಿ ಅನುಸರಿಸಬೇಕಾದ ಕ್ರಮಗಳ ಬಗ್ಗೆ.

ಉಲ್ಲೇಖ: (1) ಈ ಕಚೇರಿ ಸುತ್ತೋಲೆ ಸಂಖ್ಯೆ: ಪಪೂಶಿಇ/ಶೈಶಾ/ ಆನ್-ಲೈನ್ ತರಗತಿ/2020-21 ದಿನಾಂಕ: 21-07-2020

(2) ಈ ಕಚೇರಿ ಸುತ್ತೋಲೆ ಸಂಖ್ಯೆ: ಪಪೂಶಿ/ಪೂಪ/ವೇಪ/2019-20 ದಿನಾಂಕ: 10-08-2020.

***

ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆ-2020ರಲ್ಲಿ ಅನುತ್ತೀರ್ಣರಾದ ವಿದ್ಯಾರ್ಥಿಗಳಿಗೆ ಪೂರಕ ಪರೀಕ್ಷೆಗಳನ್ನು ನಡೆಸುವ ಸಂಬಂಧ ಉಲ್ಲೇಖ-(2)ರ ಪತ್ರದಲ್ಲಿ ವೇಳಾಪಟ್ಟಿ ಪ್ರಕಟಿಸಲಾಗಿದೆ. ಅದರಂತೆ ರಾಜ್ಯಾದ್ಯಂತ ದ್ವಿತೀಯ ಪಿಯುಸಿ ಪೂರಕ ಪರೀಕ್ಷೆಗಳನ್ನು ದಿನಾಂಕ 07-09-2020 ರಿಂದ ದಿನಾಂಕ: 18-09-2020 ರವರೆಗೆ ನಡೆಸಲಾಗುತ್ತಿದೆ. ಈ ಸಂಬಂಧ ಇಲಾಖೆಯು ಪೂರ್ವ ಪ್ರಕ್ರಿಯೆಗಳನ್ನು ಕೈಗೊಳ್ಳಲಾಗುತ್ತಿದೆ.

ಕೋವಿಡ್-19ರ ಸಾಂಕ್ರಾಮಿಕ ರೋಗದ ಹಿನ್ನೆಲೆಯಲ್ಲಿ 2020-21ನೇ ಸಾಲಿನ ದ್ವಿತೀಯ ಪಿಯುಸಿ ವಿದ್ಯಾರ್ಥಿಗಳಿಗೆ ಅವರ ಶೈಕ್ಷಣಿಕ ಪ್ರಗತಿಗೆ ಅನುಕೂಲವಾಗುವಂತೆ ಉಲ್ಲೇಖ-(1)ರ ಸುತ್ತೋಲೆಯಲ್ಲಿ ಪ್ರಿ-ರೆಕಾರ್ಡೆಡ್ ವಿಡಿಯೋ ತರಗತಿಗಳನ್ನು ಯೂಟ್ಯೂಬ್ ಮೂಲಕ ನಡೆಸಲು ತಿಳಿಸಲಾಗಿತ್ತು. ಈ ಆನ್-ಲೈನ್ ಶಿಕ್ಷಣದ ಬಗ್ಗೆ ವಿದ್ಯಾರ್ಥಿಗಳಿಂದ ಹಾಗೂ ಪೋಷಕರಿಂದ ಉತ್ತಮ ಸ್ಪಂದನೆ ಸಿಕ್ಕಿರುತ್ತದೆ ಹಾಗೂ ಮೆಚ್ಚುಗೆಗೆ ಪಾತ್ರವಾಗಿರುತ್ತದೆ. ಸದರಿ ಯೂಟ್ಯೂಬ್ ತರಗತಿಗಳನ್ನು ಸೂಕ್ತವಾಗಿ ನಿರ್ವಹಿಸಲು ಮತ್ತು ವಿದ್ಯಾರ್ಥಿಗಳಿಗೆ ಯಾವುದೇ ಸಂಶಯವಿದ್ದಲ್ಲಿ ಅದನ್ನು ನಿವಾರಿಸಲು ಕಾಲೇಜಿನ ವಿಷಯವಾರು ಉಪನ್ಯಾಸಕರ ಸಲಹೆ ಮತ್ತು ಸಹಕಾರ ವಿದ್ಯಾರ್ಥಿಗಳಿಗೆ ಅಗತ್ಯವಾಗಿರುತ್ತದೆ. ಈ ಕುರಿತು ಪ್ರಾಂಶುಪಾಲರು ಮತ್ತು ಉಪನ್ಯಾಸಕರು ಈಗಾಗಲೇ ವಾಟ್ಸ್‌ಅಪ್ ಗ್ರೂಪ್ ಅನ್ನು ರಚಿಸಿರುತ್ತಾರೆ. ಈ ರೀತಿ ವಿದ್ಯಾರ್ಥಿಗಳಿಗೆ ಯೂಟ್ಯೂಬ್ ತರಗತಿಗಳನ್ನು ವೀಕ್ಷಿಸಲು ಪ್ರೇರಣೆ ಮತ್ತು ಪಾಠ-ಪ್ರವಚನಗಳಲ್ಲಿನ ಸಂಶಯ ನಿವಾರಣೆ ಮಾಡುವ ಅವಶ್ಯಕತೆ ಇರುತ್ತದೆ.

ಈಗಾಗಲೇ ಎಸ್.ಎಸ್.ಎಲ್.ಸಿ ಪರೀಕ್ಷಾ ಫಲಿತಾಂಶವು ಪ್ರಕಟಗೊಂಡಿದ್ದು, ಪ್ರಥಮ ಪಿಯು ತರಗತಿಗಳನ್ನು ಪ್ರಾರಂಭಿಸುವುದಕ್ಕಿಂತ ಮುಂಚಿತವಾಗಿ ವಿದ್ಯಾರ್ಥಿಗಳ ದಾಖಲಾತಿ ಪ್ರಕ್ರಿಯೆಯನ್ನು ಆರಂಭಿಸಬೇಕಿದೆ ಹಾಗೂ ದ್ವಿತೀಯ ಪಿಯುಸಿ ಪೂರಕ ಪರೀಕ್ಷೆ ನಡೆಸುವ ಸಂಬಂಧ ಕಾಲೇಜುಗಳಲ್ಲಿ ಮತ್ತು ಪರೀಕ್ಷಾ ಕೇಂದ್ರಗಳಲ್ಲಿ ಪೂರ್ವ ಸಿದ್ಧತೆಗಳನ್ನು ಮಾಡಿಕೊಳ್ಳಬೇಕಾಗಿರುತ್ತದೆ. ಈ ಹಿನ್ನೆಲೆಯಲ್ಲಿ *ರಾಜ್ಯದ ಎಲ್ಲಾ ರೀತಿಯ ಪದವಿ ಪೂರ್ವ ಕಾಲೇಜುಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಪ್ರಾಂಶುಪಾಲರು, ಉಪನ್ಯಾಸಕರು ಹಾಗೂ ಸಿಬ್ಬಂದಿ ವರ್ಗದವರು ಕೋವಿಡ್ ಕಾರ್ಯದಲ್ಲಿ ನಿಯೋಜಿತಗೊಂಡವರನ್ನು*

M. K[illegible]

Scanned with CamScanner

**ಹೊರತುಪಡಿಸಿ ಉಳಿದೆಲ್ಲಾ ಸಿಬ್ಬಂದಿಗಳು ಎಲ್ಲಾ ಕಾರ್ಯ ನಿರತ ದಿನಗಳಲ್ಲಿ ಕಾಲೇಜುಗಳಿಗೆ ಆಗಮಿಸುವುದು.**

ಮೇಲ್ಕಂಡ ಎಲ್ಲಾ ಅಂಶಗಳ ಹಿನ್ನೆಲೆಯಲ್ಲಿ ಕಾಲೇಜುಗಳಲ್ಲಿ ವಿದ್ಯಾರ್ಥಿಗಳಿಗೆ ತರಗತಿಗಳನ್ನು ನಡೆಸುವುದನ್ನು ಮಾತ್ರ ಬಿಟ್ಟು ಉಳಿದೆಲ್ಲಾ ದಾಖಲಾತಿಯನ್ನೊಳಗೊಂಡಂತೆ ಪೂರಕವಾದ ಶೈಕ್ಷಣಿಕ ಚಟುವಟಿಕೆಗಳನ್ನು ನಡೆಸಲು **ದಿನಾಂಕ:13-08-2020 ರಿಂದ ಕಾಲೇಜಿಗೆ ಹಾಜರಾಗಲು ಸೂಚಿಸಿದೆ.** ಕಾಲೇಜಿಗೆ ಹಾಜರಾಗುವ ಸಂದರ್ಭದಲ್ಲಿ ಕೋವಿಡ್-19ರ ಹಿನ್ನೆಲೆಯಲ್ಲಿ ಸಾಮಾಜಿಕ ಅಂತರವನ್ನೊಳಗೊಂಡಂತೆ ಎಲ್ಲಾ ಮುಂಜಾಗ್ರತಾ ಕ್ರಮಗಳನ್ನು ಕಡ್ಡಾಯವಾಗಿ ಅನುಸರಿಸುವುದು.

ಇಲಾಖೆಯ ಈ ಕಾರ್ಯವನ್ನು ಸೂಕ್ತ ರೀತಿಯಲ್ಲಿ ನಿರ್ವಹಿಸಿ ಯಶಸ್ವಿಗೊಳಿಸಲು ಹಾಗೂ ಯಾವುದೇ ಹಂತದಲ್ಲಿ ಲೋಪವಾಗದಂತೆ ಎಚ್ಚರವಹಿಸಲು ತಿಳಿಸಿದೆ. ಸಂಬಂಧಿಸಿದ ಜಿಲ್ಲೆಗಳ ಜಿಲ್ಲಾ ಉಪನಿರ್ದೇಶಕರು ತಮ್ಮ ವ್ಯಾಪ್ತಿಯ ಎಲ್ಲಾ ಪದವಿ ಪೂರ್ವ ಕಾಲೇಜುಗಳಲ್ಲಿ ಸದರಿ ಕಾರ್ಯ ಸುಗಮವಾಗಿ ನಿರ್ವಹಿಸುವ ಸಂಬಂಧ ವೈಯಕ್ತಿಕವಾಗಿ ಗಮನಹರಿಸಿ ಉಸ್ತುವಾರಿ ನಡೆಸಲು ಸೂಚಿಸಿದೆ.

ನಿರ್ದೇಶಕರು
ಪದವಿ ಪೂರ್ವ ಶಿಕ್ಷಣ ಇಲಾಖೆ

**ಪ್ರತಿಗಳು:-**

1. ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ, ಬಹುಮಹಡಿ ಕಟ್ಟಡ, ಬೆಂಗಳೂರು-ಮಾಹಿತಿಯನ್ನು ಗೌರವಯುತವಾಗಿ ಸಲ್ಲಿಸಿದೆ.
2. ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು-ಇವರಿಗೆ ಮಾಹಿತಿಯನ್ನು ಗೌರವಯುತವಾಗಿ ಸಲ್ಲಿಸಿದೆ.
3. ರಾಜ್ಯದ ಎಲ್ಲಾ ಜಿಲ್ಲೆಗಳ ಜಿಲ್ಲಾ ಉಪ ನಿರ್ದೇಶಕರುಗಳಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ.
4. ರಾಜ್ಯದ ಎಲ್ಲಾ ಪದವಿ ಪೂರ್ವ ಕಾಲೇಜುಗಳ ಪ್ರಾಂಶುಪಾಲರುಗಳಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ, ಸಂಬಂಧಿಸಿದ ಜಿಲ್ಲಾ ಉಪನಿರ್ದೇಶಕರುಗಳ ಮೂಲಕ.
5. ನಿರ್ದೇಶಕರ ಅಪ್ತ ಶಾಖೆ, ಪದವಿ ಪೂರ್ವ ಶಿಕ್ಷಣ ಇಲಾಖೆ ಮಾಹಿತಿಗಾಗಿ.
6. ಇ-ಆಡಳಿತ ಶಾಖೆ, ಪದವಿ ಪೂರ್ವ ಶಿಕ್ಷಣ ಇಲಾಖೆ-ಇವರಿಗೆ - ರಾಜ್ಯದ ಎಲ್ಲಾ 32 ಜಿಲ್ಲೆಗಳ ಉಪನಿರ್ದೇಶಕರುಗಳಿಗೆ ಇ-ಮೇಲ್ ಮೂಲಕ ರವಾನಿಸಲು ಹಾಗೂ ವೆಬ್ ಸೈಟ್‌ನಲ್ಲಿ ಪ್ರಕಟಿಸಲು-ಮುಂದಿನ ಕ್ರಮಕ್ಕಾಗಿ.
7. ಕಛೇರಿ ಪ್ರತಿ.

Scanned with CamScanner